**Bangalore**
**Regional News**
**02.06.2026 / 14.30 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಮುಖ್ಯಮಂತ್ರಿಯಾಗಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ನಾಳೆ ಪ್ರಮಾಣವಚನ; ಲೋಕಭವನದಲ್ಲಿ ಸಿದ್ಧತೆ

೨. ಸರ್ಕಾರದಲ್ಲಿ ಯಾವುದೇ ಹುದ್ದೆ ನೀಡಿದರೂ ಕಾರ್ಯನಿರ್ವಹಿಸಲು ಬದ್ಧ -ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಸ್ಪಷ್ಟನೆ

೩. ನವದೆಹಲಿಯಲ್ಲಿ ನಾಳೆ ರಾಷ್ಟ್ರೀಯ ಪಂಚಾಯತ್ ಪ್ರಶಸ್ತಿ -೨೦೨೫ ಪ್ರದಾನ; ರಾಜ್ಯದ ಆರು ಪಂಚಾಯಿತಿಗಳಿಗೆ ಪುರಸ್ಕಾರ

೪. ರಾಜ್ಯದ ಆರ್ಥಿಕ ಪರಿಸ್ಥಿತಿ ಹದಗೆಡಿಸಿ ನಾಯಕತ್ವ ಹಸ್ತಾಂತರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ- ಬಿಜೆಪಿ ಆರೋಪ

**<><*<><>*><>**

ಮುಖ್ಯಮಂತ್ರಿಯಾಗಿ ನಾಳೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಲೋಕಭವನದ ಗಾಜಿನಮನೆಯಲ್ಲಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಪ್ರಮಾಣವಚನ ಬೋಧಿಸಲಿದ್ದಾರೆ. ಡಿ.ಕೆ.ಶಿವಕುಮಾರ್ ಅವರೊಂದಿಗೆ ಮೊದಲ ಹಂತದಲ್ಲಿ ಹತ್ತು ಸಚಿವರು ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಸಿದ್ಧತೆಗಳು ನಡೆಯುತ್ತಿದ್ದು, ಲೋಕಭವನದ ಬಳಿ ಬಿಗಿಭದ್ರತೆ ಏರ್ಪಡಿಸಲಾಗಿದೆ. ಯಾವುದೇ ಆಡಂಬರವಿಲ್ಲದೆ ಸರಳವಾಗಿ ಪ್ರಮಾಣವಚನ ಕಾರ್ಯಕ್ರಮ ನೆರವೇರಲಿದೆ.

**<><*<><>*><>**

ನಾಳೆ ನಿಯೋಜಿತ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರಮಾಣವಚನ ಸಮಾರಂಭ ಲೋಕಭವನದಲ್ಲಿ ನಿಗದಿಯಾಗಿರುವುದರಿಂದ ಸುತ್ತಮುತ್ತಲ ಪ್ರದೇಶದಲ್ಲಿ ಜನಸಂದಣಿ ಹಾಗೂ ವಾಹನ ಸಂಚಾರ ದಟ್ಟಣೆ ಉಂಟಾಗಲಿದೆ.  ಈ ಹಿನ್ನೆಲೆಯಲ್ಲಿ ಭದ್ರತೆ ಮತ್ತು ಸುರಕ್ಷತೆಯ ದೃಷ್ಟಿಯಿಂದ ವಿಧಾನಸೌಧ, ವಿಕಾಸಸೌಧ ಹಾಗೂ ಬಹುಮಹಡಿ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ಹಾಗೂ ಅಧಿಕಾರಿಗಳಿಗೆ ನಾಳೆ ಅಪರಾಹ್ನದಿಂದ ರಜೆ ಘೋಷಿಸಲಾಗಿದೆ. ಇದೇ ವೇಳೆ, ಲೋಕಭವನಕ್ಕೆ ಆಹ್ವಾನಿತರಿಗೆ ಮಾತ್ರ ಪ್ರವೇಶವಿದ್ದು, ಸಾರ್ವಜನಿಕರು ಪ್ರವೇಶಿಸಲು ಅವಕಾಶವಿರುವುದಿಲ್ಲ. ನಾಳೆ ಮಧ್ಯಾಹ್ನ ೧೨ ಗಂಟೆಯಿಂದ ರಾತ್ರಿ ೮ ಗಂಟೆಯವರೆಗೆ ಕೆಲ ರಸ್ತೆಗಳ ಸಂಚಾರದಲ್ಲಿ ಮಾರ್ಪಾಡು ಮಾಡಲಾಗಿದೆ. ಕಬ್ಬನ್ ರಸ್ತೆಯ ಬಿಆರ್‌ವಿ ಜಂಕ್ಷನ್‌ನಿಂದ ಸಿಟಿಒ ಜಂಕ್ಷನ್‌ವರೆಗೆ ಹಾಗೂ ಸಿಟಿಒ ವೃತ್ತದಿಂದ ಲೋಕಭವನದವರೆಗೆ ಕಾರ್ಯಕ್ರಮದಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿರುವ ವಾಹನಗಳನ್ನು ಹೊರತುಪಡಿಸಿ, ಎಲ್ಲಾ ಮಾದರಿಯ ವಾಹನಗಳ ಸಂಚಾರವನ್ನು ನಿರ್ಬಂಧಿಸಲಾಗಿದೆ ಎಂದು ಬೆಂಗಳೂರು ಪೊಲೀಸರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಇದೇ ವೇಳೆ ನಾಳೆ ಮಧ್ಯಾಹ್ನ ೧೨ ಗಂಟೆಯಿಂದ ರಾತ್ರಿ ೧೦ ಗಂಟೆಯವರೆಗೆ ಬೆಂಗಳೂರು ನಗರ ವ್ಯಾಪ್ತಿ ಪ್ರದೇಶದಲ್ಲಿ ಭಾರೀ ವಾಹನಗಳ ಸಂಚಾರವನ್ನು ನಿಷೇಧಿಸಲಾಗಿದೆ.

<><*<><>*><>

ಸರ್ಕಾರ ಯಾವುದೇ ಜವಾಬ್ದಾರಿ ನೀಡಿದರೂ ಕಾರ್ಯನಿರ್ವಹಿಸಲು ಬದ್ಧ ಎಂದು ಸಭಾಧ್ಯಕ್ಷ ಯು.ಟಿ. ಖಾದರ್ ಸ್ಪಷ್ಟಪಡಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾವು ಸಭಾಧ್ಯಕ್ಷರಾಗಿದ್ದು, ಯಾವುದೇ ಸಚಿವ ಸ್ಥಾನದ ಆಕಾಂಕ್ಷಿಯಲ್ಲ ಎಂದು ಹೇಳಿದ್ದಾರೆ. ಯಾರಿಗೆ ಯಾವ ಸ್ಥಾನ ನೀಡಬೇಕು ಎಂಬುದು ಸರ್ಕಾರಕ್ಕೆ ಹಾಗೂ ಪಕ್ಷಕ್ಕೆ ಬಿಟ್ಟ ವಿಚಾರವಾಗಿದೆ. ಕೊಟ್ಟರೆ ಸಚಿವ ಸ್ಥಾನ ಇಲ್ಲವಾದರೆ ಸಭಾಧ್ಯಕ್ಷ ಸ್ಥಾನ,  ಅದೂ ಇಲ್ಲದಿದ್ದರೆ ಶಾಸಕನಾಗಿ ಜವಾಬ್ದಾರಿ ನಿರ್ವಹಿಸುವೆ ಎಂದು ತಿಳಿಸಿದ್ದಾರೆ. ಪಕ್ಷ ಸೂಚಿಸಿದರೆ, ಸಭಾಧ್ಯಕ್ಷ ಸ್ಥಾನಕ್ಕೆ ರಾಜಿನಾಮೆ ನೀಡಲು ಸಿದ್ಧ ಎಂದು ಹೇಳಿದ್ದಾರೆ. ಶಾಸಕರಾದವರು ಒಮ್ಮೆಯಾದರೂ ಜೀವನದಲ್ಲಿ ಸಭಾಧಕ್ಷರಾಗಬೇಕು ಎಂದು ಯು.ಟಿ.ಖಾದರ್ ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಕೇಂದ್ರ ಸರ್ಕಾರದ ಪಂಚಾಯತ್ ರಾಜ್ ಸಚಿವಾಲಯ ಪ್ರಕಟಿಸಿರುವ ೨೦೨೫ನೇ ಸಾಲಿನ ದೀನ್ ದಯಾಳ್ ಉಪಾಧ್ಯಾಯ ರಾಷ್ಟ್ರೀಯ ಪಂಚಾಯತ್ ಪ್ರಶಸ್ತಿ-೨೦೨೫ ಪ್ರದಾನ ಸಮಾರಂಭವು

ನಾಳೆ ನವದೆಹಲಿಯಲ್ಲಿ ನಡೆಯಲಿದೆ. ದೇಶಾದ್ಯಂತದ ೪೨ ಅತ್ಯುತ್ತಮ ಪಂಚಾಯಿತಿಗಳಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುತ್ತಿದೆ. ರಾಜ್ಯ ಆರು ಗ್ರಾಮ ಪಂಚಾಯಿತಿಗಳು ಅಭಿವೃದ್ಧಿ ಪುರಸ್ಕಾರಕ್ಕೆ ಭಾಜನವಾಗಿವೆ. ಆಯ್ಕೆಯಾದ ಆರು ಗ್ರಾಮ ಪಂಚಾಯಿತಿಗಳಲ್ಲಿ ಐದು ಪಂಚಾಯಿತಿಗಳು ಉಡುಪಿ ಜಿಲ್ಲೆಗೆ ಸೇರಿವೆ. ಹೆಬ್ರಿ ತಾಲೂಕಿನ ಮುದ್ರಾಡಿ ಮತ್ತು ಮಡಾಮಕ್ಕಿ, ಕುಂದಾಪುರ ತಾಲೂಕಿನ ವಂಡ್ಸೆ ಮತ್ತು ಹಕ್ಲಾಡಿ ಹಾಗೂ ಕಾರ್ಕಳ ತಾಲೂಕಿನ ಸಾಣೂರು ಉಡುಪಿ ಜಿಲ್ಲೆಯಿಂದ ಆಯ್ಕೆಯಾದ ಐದು ಗ್ರಾಮ ಪಂಚಾಯತ್‌ಗಳಾಗಿವೆ. ಬೆಂಗಳೂರು ನಗರ ಜಿಲ್ಲೆಯ ಹಾಲನಾಯಕನಹಳ್ಳಿ ರಾಷ್ಟ್ರೀಯ ಮಟ್ಟದ ಪುರಸ್ಕಾರಕ್ಕೆ ಆಯ್ಕೆಯಾಗಿರುವ ಮತ್ತೊಂದು ಗ್ರಾಮ ಪಂಚಾಯತ್ ಆಗಿದೆ. ಕೇಂದ್ರ ಸರ್ಕಾರ ಒಟ್ಟು ಆರು ವಿಭಾಗದಲ್ಲಿ ಪ್ರಶಸ್ತಿಯನ್ನ ನೀಡುತ್ತಿದ್ದು, ಇವುಗಳಲ್ಲಿ ಮುದ್ರಾಡಿ ಗ್ರಾಮ ಪಂಚಾಯತ್ ಬಡತನ ಮುಕ್ತ ಹಾಗೂ ಜೀವನೋಪಾಯ ಸಂವರ್ಧನ ವಿಭಾಗದಲ್ಲಿ ಪ್ರಶಸ್ತಿ ಪಡೆದರೆ, ವಂಡ್ಸೆ ಗ್ರಾಮ ಪಂಚಾಯತ್ ಆರೋಗ್ಯಪೂರ್ಣ ಪಂಚಾಯತ್ ವಿಭಾಗದಲ್ಲಿ ಪ್ರಶಸ್ತಿಯನ್ನು ಗೆದ್ದು ಕೊಂಡಿದೆ. ಹೆಬ್ರಿ ತಾಲೂಕಿನ ಮಡಾಮಕ್ಕಿ ಗ್ರಾಮ ಪಂಚಾಯತ್, ಜಲಸಮೃದ್ಧ ಮೂಲಸೌಕರ್ಯ ಅಭಿವೃದ್ಧಿ ವಿಭಾಗದಲ್ಲಿ ಪ್ರಶಸ್ತಿ ಪಡೆದಿದೆ. ಕಾರ್ಕಳ ತಾಲೂಕಿನ ಸಾಣೂರು ಗ್ರಾಮ ಪಂಚಾಯತ್, ಸ್ವಯಂಸಮೃದ್ಧ ಮೂಲ ಸೌಕರ್ಯ ಅಭಿವೃದ್ಧಿ ವಿಭಾಗದಲ್ಲಿ ಹಾಗೂ ಹಕ್ಲಾಡಿ ಗ್ರಾಮ ಪಂಚಾಯತ್ ಸಾಮಾಜಿಕ ನ್ಯಾಯ ಹಾಗೂ ಸಾಮಾಜಿಕ ಸುರಕ್ಷತಾ ಪಂಚಾಯತ್ ವಿಭಾಗದಲ್ಲಿ ರಾಜ್ಯದ ಅತ್ಯುತ್ತಮ ಪಂಚಾಯತ್ ಆಗಿ ಮಾನ್ಯತೆ ಪಡೆದಿದೆ. ಬೆಂಗಳೂರಿನ ಹಾಲನಾಯಕನಹಳ್ಳಿ ಪಂಚಾಯತ್ ಮಕ್ಕಳ ಸ್ನೇಹಿ ಪಂಚಾಯತ್ ಆಗಿ ಪುರಸ್ಕಾರಕ್ಕೆ ಆಯ್ಕೆಯಾಗಿದೆ ಎಂದು ಕೇಂದ್ರ ಪಂಚಾಯತ್‌ರಾಜ್ ಸಚಿವಾಲಯದ ಪ್ರಕಟಣೆ ಈಗಾಗಲೇ ತಿಳಿಸಿದೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರದಿಂದ ಕೆಳಗಿಳಿದು ಡಿ.ಕೆ.ಶಿವಕುಮಾರ್ ಅವರಿಗೆ ನಾಯಕತ್ವ ಹಸ್ತಾಂತರಿಸುವ ಮೊದಲು ರಾಜ್ಯವನ್ನು ಆರ್ಥಿಕ ಬಿಕ್ಕಟ್ಟಿನಲ್ಲಿ ಸಿಲುಕಿಸಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅವರು, ಸಿದ್ದರಾಮಯ್ಯ ಅವರಿಗೆ ರಾಜ್ಯದ ಆರ್ಥಿಕ ಪರಿಸ್ಥಿತಿ ಹದಗೆಟ್ಟಿರುವ ಬಗ್ಗೆ ಅರಿವಿತ್ತು. ಈ ಹಿನ್ನೆಲೆಯಲ್ಲಿ ಉದ್ದೇಶ ಪೂರ್ವಕವಾಗಿಯೇ ಮುಖ್ಯಮಂತ್ರಿ ಹುದ್ದೆಯನ್ನು ಹಸ್ತಾಂತರಿಸಿದ್ದಾರೆ ಎಂದು ತಿಳಿಸಿದ್ದಾರೆ. ಈಗಾಗಲೇ ಗೃಹಲಕ್ಷ್ಮೀ ಕಂತುಗಳನ್ನು ಸ್ಥಗಿತಗೊಳಿಸಲಾಗಿದೆ. ಶಕ್ತಿ ಯೋಜನೆಗೆ ಹಣ ಲಭ್ಯವಿಲ್ಲ, ಕೆಎಸ್‌ಆರ್‌ಟಿಸಿ ನೌಕರರು ಹಲವು ಸೌಲಭ್ಯಗಳಿಂದ ವಂಚಿತರಾಗಿದ್ದು, ಅನ್ನಭಾಗ್ಯ

ಯೋಜನೆ ಹಂಚಿಕೆ ವಿಳಂಬವಾಗಿದೆ ಎಂದು ದೂರಿದ್ದಾರೆ. ಅವೈಜ್ಞಾನಿಕ ಕಲ್ಯಾಣ ಬದ್ಧತೆಗಳು, ರಾಜ್ಯದ ಆರ್ಥಿಕ ಸ್ಥಿತಿಗತಿಯನ್ನು ದುರ್ಬಲಗೊಳಿಸಿವೆ ಎಂದು ಆರ್.ಅಶೋಕ ಆರೋಪಿಸಿದ್ದಾರೆ.

<><*<><>*><>

'ಪ್ರಧಾನ ಮಂತ್ರಿ ಸ್ವನಿಧಿ ಯೋಜನೆಗೆ' ಆರು ವರ್ಷ ತುಂಬಿದೆ. ಈ ಹಿನ್ನೆಲೆಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಸ್ವನಿಧಿ ಫಲಾನುಭವಿಗಳು ಆಕಾಶವಾಣಿಯೊಂದಿಗೆ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡಿದ್ದು, ಯೋಜನೆಯ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

<><*<><>*><>

ಹಾವೇರಿ ಜಿಲ್ಲೆಯಲ್ಲಿ ಸುರಿದ ಪೂರ್ವ ಮುಂಗಾರಿನ ಅಕಾಲಿಕ ಮಳೆಯಿಂದಾಗಿ ಹೆಚ್ಚು ಹಾನಿಯಾಗಿದ್ದು, ಈ ಬಗ್ಗೆ ಜಿಲ್ಲಾಡಳಿತ ವರದಿ ಸಿದ್ದಪಡಿಸಿದೆ. ಜಿಲ್ಲೆಯಾದ್ಯಂತ ವಿದ್ಯುತ್ ಸಂಪರ್ಕ ಕಲ್ಪಿಸುವ ವ್ಯವಸ್ಥೆಯಲ್ಲೂ ಅವಘಡಗಳು ಸಂಭವಿಸಿದ್ದು, ಇದರಿಂದಾಗಿ ಹೆಸ್ಕಾಂಗೆ ೧೧ ಕೋಟಿ ೬೯ ಲಕ್ಷ ರೂಪಾಯಿ ನಷ್ಟ ಉಂಟಾಗಿದೆ. ಜಿಲ್ಲೆಯಾದ್ಯಂತ ೨೦೨೬-೨೭ನೇ ಪೂರ್ವ ಮುಂಗಾರಿನಲ್ಲಿ ಮೇವರೆಗೆ ೧ ಸಾವಿರದ ೩೭೮.೪೭ ಹೆಕ್ಟೇರ್ ಬೆಳೆ ಹಾನಿಯಾಗಿದೆ. ೧ ಸಾವಿರದ ೧೮೧ ಹೆಕ್ಟೇರ್‌ನಷ್ಟು ಕೃಷಿ ಹಾಗೂ ೨೦೦.೪೭ ಹೆಕ್ಟೇರ್‌ನಷ್ಟು ತೋಟಗಾರಿಕೆ ಬೆಳೆ ಹಾನಿಯಾಗಿದೆ. ಭತ್ತ, ಬಾಳೆ, ವೀಳೆದೆಲೆ, ಅಡಿಕೆ, ಪಪ್ಪಾಯಿ, ಟೊಮೆಟೊ, ಎಲೆಕೋಸು, ತೆಂಗು, ಮಾವು, ಮೆಣಸಿನಕಾಯಿ, ಬಿನ್ಸ್, ಹಾಗಲಕಾಯಿ, ಹಿರೇಕಾಯಿ ಬೆಳೆಯೂ ಮಳೆ-ಗಾಳಿಯಿಂದ ಹಾನಿಯಾಗಿದೆ. ರಾಣೆಬೆನ್ನೂರು ಹಾಗೂ ರಟ್ಟಿಹಳ್ಳಿ ತಾಲ್ಲೂಕಿನಲ್ಲಿಯೇ ಹೆಚ್ಚು ಹಾನಿ ಉಂಟಾಗಿದೆ. ಬೆಳೆ ಹಾನಿ ಬಗ್ಗೆ ಜಿಲ್ಲಾಡಳಿತವು ಜಂಟಿ ಸಮೀಕ್ಷೆ ನಡೆಸಿದ್ದು, ೬೮೦.೩೬ ಹೆಕ್ಟೇರ್ ಬೆಳೆ ಹಾನಿಗೆ ೧೧೭.೩೦ ಲಕ್ಷ ರೂಪಾಯಿ ಪರಿಹಾರ ನಿಗದಿ ಮಾಡಿದೆ. ಉಳಿದ ಬೆಳೆ ಹಾನಿ ಪರಿಶೀಲನೆ ಮುಂದುವರಿದಿದೆ ಎಂದು ಜಿಲ್ಲಾಧಿಕಾರಿ ವಿಜಯಮಹಾಂತೇಶ ದಾನಮ್ಮನವರ ಮಾಹಿತಿ ನೀಡಿದ್ದಾರೆ.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕೃಷಿ ಭಾಗ್ಯ ಯೋಜನೆ ಅಡಿಯಲ್ಲಿ ಕೃಷಿ ಹೊಂಡ, ಕ್ಷೇತ್ರ ಬದು, ಪಾಲಿಥೀನ್ ಹೊದಿಕೆ, ತಂತಿ ಬೇಲಿ, ಪಂಪ್ಸೆಟ್ ಹಾಗೂ ಸೂಕ್ಷ್ಮ ನೀರಾವರಿ ಘಟಕಗಳನ್ನು ಪ್ಯಾಕೇಜ್ ಮಾದರಿಯಲ್ಲಿ ಅನುಷ್ಠಾನಗೊಳಿಸಲಾಗಿದೆ. ಕೃಷಿ ಹೊಂಡಗಳಲ್ಲಿ ಆಕಸ್ಮಿಕ ಸಾವುಗಳನ್ನು ತಡೆಗಟ್ಟಲು ಹಾಗೂ ಸಾರ್ವಜನಿಕರ ಸುರಕ್ಷತೆ ದೃಷ್ಟಿಯಿಂದ ಕಡ್ಡಾಯವಾಗಿ ಕೃಷಿ

ಹೊಂಡಗಳಿಗೆ  ತಂತಿ ಬೇಲಿ ಅಳವಡಿಸಿ, ಸೂಚನಾ ಫಲಕ ಪ್ರದರ್ಶಿಸುವಂತೆ ಕೃಷಿ ಇಲಾಖೆಯ ಜಿಲ್ಲಾ ಜಂಟಿ ನಿರ್ದೇಶಕಿ ಕಲಾವತಿ.ಬಿ.ಜಿ ರೈತರಲ್ಲಿ ಮನವಿ ಮಾಡಿದ್ದಾರೆ.

<>><>< ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು ><><<>